ಕಮಲಾಪುರ ನಗರದಲ್ಲಿರುವ ಜೂನಿಯರ್ ಕಾಲೇಜು ಹಾಗೂ ಪ್ರೌಢಶಾಲೆಗಳಲ್ಲಿ ಉಪನ್ಯಾಸಕರ ಕೊರತೆ.

375(642) ಶ್ರೀ ರೇವುನಾಯಕ ಬಳಮಗಿ(ಕಮಲಾಪುರ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಕಮಲಾಪುರದಲ್ಲಿರುವ ಜೂನಿಯರ್ ಕಾಲೇಜು ಹಾಗೂ ಪ್ರೌಢಶಾಲೆಗಳಲ್ಲಿ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಉಪನ್ಯಾಸಕರ ಕೊರತೆಯಿಂದ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ತೊಂದರೆಯಾಗುವುದಿಲ್ಲವೆ?

ಇ) ಈ ಕಾಲೇಜುಗಳಲ್ಲಿ ಇರುವ ಉಪನ್ಯಾಸಕರ ಹುದ್ದೆಗಳ (ಖಾಲಿಇರುವ) ಸಂಖ್ಯೆ ಎಷ್ಟು ಈ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು?

ಶ್ರೀ ಹೆಚ್.ಜಿ.ಗೋವಿಂದಗೌಡ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು.

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ಖಾಲಿಯಿರುವ 6 ಉಪನ್ಯಾಸಕರ ಹುದ್ದೆಗಳಲ್ಲಿ 3 ಹುದ್ದೆಗಳನ್ನು ಈಗಾಗಲೇ ತುಂಬಲಾಗಿದೆ.

ಇ) ಪ್ರಸ್ತುತ 3 ಹುದ್ದೆಗಳು ಖಾಲಿಯಿದೆ. ಇದರಲ್ಲಿ ಸಮಾಜಶಾಸ್ತ್ರ ಉಪನ್ಯಾಸಕರ ಹುದ್ದೆಯನ್ನು ಕರ್ನಾಟಕ ಲೋಕಸೇವಾ ಆಯೋಗದಿಂದ ಆಯ್ಕೆಪಟ್ಟಿ ಬಂದ ತಕ್ಷಣ ಭರ್ತಿ ಮಾಡಲಾಗುವುದು. ಉಳಿದ ಇತಿಹಾಸ ಮತ್ತು ಶಿಕ್ಷಣ ಉಪನ್ಯಾಸಕರ ಹುದ್ದೆಗಳಿಗೆ ಹತ್ತಿರದ ಕಾಲೇಜುಗಳಿಂದ ಉಪನ್ಯಾಸಕರನ್ನು ನಿಯೋಜಿಸುವ ಬಗ್ಗೆ ಸಂಬಂಧಿಸಿದ ವಿಭಾಗದ ಸಹನಿರ್ದೇಶಕರಿಗೆ ಈಗಾಗಲೇ ನಿರ್ದೇಶನ ನೀಡಾಗಿದೆ. ಆದರಂತೆ ಸರಿದೂಗಿಸಲಾಗುವುದು.

ಮಂಡಲ ಪಂಚಾಯಿತಿಗಳಿಗೊಂದು ಗ್ರಂಥಾಲಯ ಸ್ಥಾಪನೆ

377(728) ಶ್ರೀ ಜಿ.ವಿ.ರಾಮರೆಡ್ಡಿ (ಬಾಗೇಪಲ್ಲಿ) ಮಾನ್ಯ ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಮಂಡಲ ಪಂಚಾಯಿತಿ ವ್ಯಾಪ್ತಿಯಲ್ಲಿ ಎಷ್ಟು ಗ್ರಂಥಾಲಯಗಳಿವೆ. ಈ ಗ್ರಂಥಾಲಯಗಳಿಗೆ ಪ್ರತಿ ವರ್ಷ ಎಷ್ಟು ಹಣ ಖರ್ಚು ಮಾಡಲಾಗುತ್ತಿದೆ. (ಕಳೆದ ಮೂರು) ವರ್ಷಗಳ ವಿವರ ನೀಡುವುದು)

ಆ) ಈ ವರ್ಷ ಎಷ್ಟು ಹೊಸ ಗ್ರಂಥಾಲಯಗಳನ್ನು ಮಂಡಲಗಳಲ್ಲಿ ತೆರೆಯಲು ಉದ್ದೇಶಿಸಿದೆ. ಇದಕ್ಕೆ ತಗಲುವ ವೆಚ್ಚವೆಷ್ಟು?

ಇ) ಈ ಗ್ರಂಥಾಲಯಗಳನ್ನು ಗ್ರಂಥಾಲಯ ಇಲಾಖೆ ವ್ಯಾಪ್ತಿಗೆ ಪಡೆದು ಪುನಶ್ಚೇತನಗೊಳ್ಳಲು ಸರ್ಕಾರವು ಬಯಸಿದೆಯೇ ಬಯಸಿದಲ್ಲಿ ರೂಪುರೇಶೆಗಳೇನು?

ಶ್ರೀ ಆರ್. ರೋಷನ್‌ಬೇಗ್ ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು

ಅ) ಒಟ್ಟು 1151 ಈ ಗ್ರಂಥಾಲಯಗಳಿಗೆ ಕೆಳಗಿನಂತೆ ಖರ್ಚು ಮಾಡಲಾಗಿದೆ.

1) 1993-94 ರೂ. 111. 75 ಲಕ್ಷಗಳು
2) 1994-95 ರೂ. 101. 99 ಲಕ್ಷಗಳು
3) 1995-96 ರೂ. 116. 00 ಲಕ್ಷಗಳು

ಆ) ಇಲ್ಲ

ಇ) ಇದು ಪರಿಶೀಲನೆಯಲ್ಲಿದೆ.

ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಬಗ್ಗೆ

378(731) ಶ್ರೀ ರಾಮರೆಡ್ಡಿ (ಬಾಗೇಪಲ್ಲಿ)ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ರಾಜ್ಯದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ?

ಆ) ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳು ವೈದ್ಯರುಗಳು ಇಲ್ಲದೆ ಇವೆ? ವೈದ್ಯರಿಲ್ಲದ ಕೇಂದ್ರಗಳಿಗೆ ವೈದ್ಯರನ್ನು ನೇಮಿಸದಿರಲು ಕಾರಣಗಳೇನು?

ಇ) ಈ ಕೇಂದ್ರಗಳನ್ನು ಶಕ್ತಿಯುತಗೊಳಿಸಲು ವಿಶ್ವಬ್ಯಾಂಕ್‌ನಿಂದ ಎಷ್ಟು ಹಣ ನೆರವು ದೊರೆಯುತ್ತದೆ?

ಈ) ಈ ಹಣವನ್ನು ಯಾವ ರೀತಿಯಲ್ಲಿ ವಿನಿಯೋಗಿಸಿಕೊಳ್ಳಲಾಗುತ್ತಿದೆ? ಸಂಪೂರ್ಣ ವಿವರ.

ಡಾ: ಹೆಚ್.ಸಿ. ಮಹದೇವಪ್ಪ ಆರೋಗ್ಯ ಕುಟುಂಬ ಕಲ್ಯಾಣ ಸಚಿವರು

ಅ) ರಾಜ್ಯದಲ್ಲಿ 1509 ಪ್ರಾಥಮಿಕ ಆರೋಗ್ಯ ಕೇಂದ್ರಗಳಿರುತ್ತವೆ.

ಆ) 179 ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಹುದ್ದೆಗಳು ಖಾಲಿ ಇರುತ್ತದೆ. 1992 ರಿಂದಲೂ ಈವರೆಗೂ ಸುಮಾರು 2500 ಕ್ಕೂ ಹೆಚ್ಚು ವೈದ್ಯರನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾಗಿತ್ತು. ಆದರೆ ಶೇಕಡ 50 ಕ್ಕೂ ಕಡಿಮೆ ವೈದ್ಯರುಗಳು ಕರ್ತವ್ಯಕ್ಕೆ ಹಾಜರಾಗಿರುವುದರಿಂದ ಹುದ್ದೆಗಳು ಖಾಲಿ ಇರುತ್ತವೆ.

ಇ) ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಶಕ್ತಿಯುತಗೊಳಿಸಲು ರಾಜ್ಯದಲ್ಲಿ 13 ಜಿಲ್ಲೆಗಳಲ್ಲಿ (ಮೈಸೂರು ವಿಭಾಗದ ಎಲ್ಲಾ ಜಿಲ್ಲೆಗಳು ಬೆಂಗಳೂರು ವಿಭಾಗದಿಂದ ಚಿತ್ರದುರ್ಗ, ಶಿವಮೊಗ್ಗ,